ಪದವಿ ಕಾಲೇಜು ಮಂಜೂರಾತಿ
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 18 : (30)

ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬಾರಾವ್ (ಜಮಖಂಡಿ)

ಅ) ಶೈಕ್ಷಣಿಕವಾಗಿ ಮುಂದುವರಿದ ಭಾರಿ ಜನಸಂಖ್ಯೆಯಿಂದ ತುಂಬಿರುವ ಜಮಖಂಡಿ ಪಟ್ಟಣದಲ್ಲಿ ಪದವಿ ಕಾಲೇಜು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಆ) ಬಡ ಮಕ್ಕಳ ಶಿಕ್ಷಣಕ್ಕಾಗಿ ಪ್ರಸಕ್ತ ಸಾಲಿನಲ್ಲಿ ಸರ್ಕಾರ ಒಂದು ಪದವಿ ಕಾಲೇನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳುವುದೇ?

ಶ್ರೀ ಸಿ.ಟಿ.ರವಿ (ಮಾನ್ಯ ಉನ್ನತ ಶಿಕ್ಷಣ ಸಚಿವರು)

ಅ) ಬಂದಿದೆ.

ಆ) ವಿದ್ಯಾರ್ಥಿಗಳ ಸಂಖ್ಯೆ ಜಮೀನಿನ ಲಭ್ಯತೆ ಹಾಗೂ ಅನುದಾನದ ಲಭ್ಯತೆಯನ್ನು ಆಧರಿಸಿ ಜಮಖಂಡಿ ಪಟ್ಟಣದಲ್ಲಿ ಸರ್ಕಾರಿ ಕಾಲೇಜನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

ಜಾವಗಲ್ ಪ್ರಾಥಮಿಕ ಆರೋಗ್ಯ ಕೇಂದ್ರ
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 33 : (11)

ಶ್ರೀ ರುದ್ರೇಶ್ ಗೌಡ ವೈ. ಎನ್. (ಬೇಲೂರು)

ಅ) ಬೇಲೂರು ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಜಾವಗಲ್ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹೋಬಳಿ ಕೇಂದ್ರವಾಗಿರುವ ಜಾವಗಲ್ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲು